ಅಂಗನವಾಡಿ ಕಾರ್ಯಕರ್ತೆಯರನ್ನು ಸರ್ಕಾರಿ ನೌಕರರೆಂದು ಪರಿಗಣಿಸುವ ಬಗ್ಗೆ.

1198. ಶ್ರೀ. ಡಿ.ಬಿ. ಚಂದ್ರೇಗೌಡ (ತೀರ್ಥಹಳ್ಳಿ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ರಾಜ್ಯದಲ್ಲಿರುವ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಎಷ್ಟು? ಹಾಗೂ ಅವರನ್ನು ಸರ್ಕಾರಿ ನೌಕರರೆಂದು ಪರಿಗಣಿಸುವ ಉದ್ದೇಶ ರಾಜ್ಯ ಸರ್ಕಾರಕ್ಕೆ ಇದೆಯೇ;

ಆ) ಅವರ ಬಹುದಿನದ ಬೇಡಿಕೆಗಳನ್ನು ಈಡೇರಿಸಲು ಇರುವ ತೊಂದರೆಯೇನು ;

ಇ) ಈ ಬಗ್ಗೆ ರಾಜ್ಯ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;

ಈ) ರಾಜ್ಯ ಸರ್ಕಾರ ಇವರ ಬೇಡಿಕೆಯ ಬಗ್ಗೆ ಯಾವ ನಿರ್ಧಾರಕ್ಕೆ ಬಂದಿರುತ್ತದೆ (ಸಂಪೂರ್ಣ ವಿವರ ನೀಡುವುದು) ?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು) –

ಅ) - 22113

ಭಾರತ ಸರ್ಕಾರದ ಮಾರ್ಗಸೂಚಿಯಂತೆ ಗೌರವ ಸೇವೆಗೆ ಗೌರವಧನ ನೀಡುತ್ತಿರುವುದರಿಂದ ಇವರನ್ನು ನಿಯಮಿಸುವ ವಿಚಾರ ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿಲ್ಲ.

ಆ) ಇವರ ಬೇಡಿಕೆ ಬಗ್ಗೆ ಕೇಂದ್ರ ಸರ್ಕಾರವೇ ನಿರ್ಣಯ ಕೈಗೊಳ್ಳಬೇಕಾಗಿದೆ.

ಇ) ಈ ಬಗ್ಗೆ ಭಾರದ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ.

ಈ) ಉತ್ತರ ಮೇಲೆ (ಇ) ಯಲ್ಲಿರುವಂತೆ.

ಶಿಗ್ಗಾಂವ್ ತಾಲ್ಲೂಕಿನ ಅಂಗನವಾಡಿ ಕಾರ್ಯಕರ್ತೆಯರ ಕೇಂದ್ರಗಳು

840. ಶ್ರೀ ಮಂಜುನಾಥ ಸಿ. ಕುನ್ನೂರ (ಶಿಗ್ಗಾಂವ್) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ಶಿಗ್ಗಾಂವ್ ತಾಲ್ಲೂಕಿನಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಕೇಂದ್ರಗಳನ್ನು ಐ.ಸಿ.ಡಿ.ಎಸ್. ನಿಯಮದನ್ವಯ ಪ್ರಾರಂಭ ಮಾಡುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸದರಿ ಕೆಲಸಗಳನ್ನು ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು) –

ಅ) ಬಂದಿರುತ್ತದೆ

ಆ) 8ನೇ ಪಂಚವಾರ್ಷಿಕ ಯೋಜನೆಯ ಅವಧಿಯಲ್ಲಿ.

ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿನ ವೈದ್ಯಾಧಿಕಾರಿಗಳು

842. ಶ್ರೀ ಮಂಜುನಾಥ ಸಿ. ಕುನ್ನೂರ (ಶಿಗ್ಗಾವ್) : – ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಎಷ್ಟು ಜನ ವೈದ್ಯಾಧಿಕಾರಿಗಳು ಇರಬೇಕೆಂದು ನಿಯಮಾವಳಿ ಇದೆ;

ಆ) ಶಿಗ್ಗಾಂವ್ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಬೇಕಿರುವ ವೈದ್ಯಾಧಿಕಾರಿಗಳನ್ನು ಕೂಡಲೇ ನಿಯೋಜಿಸಲಾಗುವುದೇ;

ಇ) ಶಿಗ್ಗಾಂವ್ ತಾಲ್ಲೂಕು ಬಂಕಾಪುರ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೆ ಏರಿಸಲಾಗುವುದೇ?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) –

ಅ) ಕನಿಷ್ಠ ಅವಶ್ಯಕತೆ ಯೋಜನೆ ಅಡಿಯಲ್ಲಿ ಮಂಜೂರಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಒಂದು ವೈದ್ಯರ ಹುದ್ದೆ ಇರುತ್ತದೆ. ಮತ್ತು ಈ ಮೊದಲು ಭಾರತ ಸರ್ಕಾರದಿಂದ ಮಂಜೂರಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಒಬ್ಬ ಪುರುಷ ಮತ್ತು ಒಬ್ಬರು ಮಹಿಳಾ ವೈದ್ಯರ ಹುದ್ದೆ ಇರಬೇಕೆಂದು ನಿಯಮ ಇರುತ್ತದೆ.

ಆ) ಪ್ರಾಥಮಿಕ ಆರೋಗ್ಯ ಕೇಂದ್ರ ಶಿಗ್ಗಾಂವ್ ಇದು ಭಾರತ ಸರ್ಕಾರ ಮಾದರಿಯ ಆರೋಗ್ಯ ಕೇಂದ್ರವಾಗಿದೆ. ಇಲ್ಲಿನ 2 ಹುದ್ದೆಗಳಲ್ಲಿ ವೈದ್ಯಾಧಿಕಾರಿಗಳು ಕಾರ್ಯ ನಿರ್ವಹಿಸುತ್ತಿರುವರು. ದಿನಾಂಕ : 9.9.91 ರಿಂದ ಪುರುಷ ವೈದ್ಯರು ಹಾಗೂ ಡಿಸೆಂಬರ್ 91 ರಿಂದ ಮಹಿಳಾ ವೈದ್ಯರು ಕೆಲಸ ನಿರ್ವಹಿಸುತ್ತಿರುವರು.

ಇ) ಸದ್ಯಕ್ಕೆ ಅಂತಹ ಪ್ರಸ್ತಾವನೆ ಇರುವುದಿಲ್ಲ.

ಕೋಣನಕೇರಿ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರಾತಿ.

843. ಶ್ರೀ ಮಂಜುನಾಥ ಸಿ. ಕುನ್ನೂರ (ಶಿಗ್ಗಾಂವ್) : – ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ಶಿಗ್ಗಾಂವ್ ತಾಲ್ಲೂಕು ಕೋಣನಕೇರಿ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲಾಗಿದೆಯೇ;

ಆ) ಹಾಗಿದ್ದಲ್ಲಿ, ಆಸ್ಪತ್ರೆಗೆ ವೈದ್ಯಾಧಿಕಾರಿಗಳ ನೇಮಕಾತಿ ಮಾಡಲಾಗಿದೆಯೇ;

ಇ) 1989–90 ಹಾಗೂ 1990–91 ನೇ ಸಾಲಿನಲ್ಲಿ ಧಾರವಾಡ ಜಿಲ್ಲೆ ಹಾಗೂ ರಾಜ್ಯದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮಂಜೂರಾಗಿವೆ;

ಈ) ಸದರಿ ಆಸ್ಪತ್ರೆಗಳಿಗೆ ವೈದ್ಯರ ನೇಮಕಾತಿಗಳನ್ನು ಮಾಡಲಾಗಿದೆಯೇ;

ಉ) ಇಲ್ಲದಿದ್ದಲ್ಲಿ ಇದಕ್ಕೆ ವಿಳಂಬವಾಗಿರಲು ಕಾರಣವೇನು;

ಊ) ಅವುಗಳನ್ನು ಕೂಡಲೇ ಸರಿಪಡಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) –

ಅ) – ಹೌದು –

ಆ) – ಇಲ್ಲ –

ಇ) 1989–90

ರಾಜ್ಯಕ್ಕೆ	: 312
ಧಾರವಾಡ ಜಿಲ್ಲೆಗೆ	: 17

1990–91

ರಾಜ್ಯಕ್ಕೆ	: 50
ಧಾರವಾಡ ಜಿಲ್ಲೆಗೆ	: 2

ಈ) – ಇಲ್ಲ –

ಉ) ಹುದ್ದೆಗಳು ಇನ್ನೂ ಮಂಜೂರಾಗಬೇಕಾಗಿದೆ.

ಊ) ಹುದ್ದೆಗಳ ಮಂಜೂರಾತಿ ಸರ್ಕಾರದ ಪರಿಶೀಲನೆಯಲ್ಲಿದೆ.